# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.

| | |
|---|---|
| ಸಿ.ಸಿ. ನಂಬರ್ | : 249/2024 |
| ಸಿ ಡಬ್ಲ್ಯೂ | : 08 |
| ಪಿ.ಡಬ್ಲ್ಯೂ | : 03 |
| ಸಾಕ್ಷಿಯ ಹೆಸರು | : ಯಲ್ಲಪ್ಪ ಶಿವಪ್ಪ ಮೇಟಿ |
| ವಯಸ್ಸು | : 59 ವರ್ಷ |
| ಉದ್ಯೋಗ | : ಎ ಎಸ್ ಐ, ಹುಬ್ಬಳ್ಳಿ ಗ್ರಾಮೀಣ ಪೋಲಿಸ್ ಠಾಣೆ. |
| ವಾಸ ಸ್ಥಳ | : ಹುಬ್ಬಳ್ಳಿ |

ದಿನಾಂಕಃ 31/01/2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ನಾನು 2019 ರಿಂದ 2023 ವರೆಗೆ ASI ಎಂದು ನವಲಗುಂದ ಪೊಲೀಸ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 02-12-2020 ರಂದು ನಾನು ಠಾಣೆಯಲ್ಲಿದ್ದಾಗ ಚಾಸಾ-1 ರವರು ಮ.01.00 ಗಂಟೆಗೆ ಠಾಣೆಗೆ ಹಾಜರಾಗಿ ಲಿಖಿತ ದೂರು, ಆರೋಪಿ, ಪಂಚನಾಮೆ ಹಾಗೂ ಮುದ್ದೆ ಮಾಲನ್ನು ಹಾಜರು ಪಡಿಸಿದ್ದು ಅದರ ಆಧಾರದ ಮೇಲೆ ಠಾಣಾ ಗುನ್ನಾ ಸಂಃ 131/2020 ನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಿರುತ್ತೇನೆ. ನಂತರ ನ್ಯಾಯಾಲಯಕ್ಕೆ ಸ್ವತ್ತಿನ ವಿವರಣೆ ಪಟ್ಟಿಯನ್ನು ಕಳುಹಿಸಿರುತ್ತೇನೆ. ಚಾಸಾ-4 ಮತ್ತು 5 ರವರ ಹೇಳಿಕೆಗಳನ್ನು ದಾಖಲಿಸಿಕೊಂಡಿರುತ್ತೇನೆ. ದಿಃ 17-12-2020 ರಂದು ಜಪ್ತಾದ ಮುದ್ದೆ ಮಾಲನ್ನು ಚಾಸಾ-06 ರವರ ಮುಖಾಂತರ ರಾಸಾಯನಿಕ ಪರೀಕ್ಷೆಗೆ ಕಳುಹಿಸಿರುತ್ತೇನೆ. ನಂತರ ವರದಿಯನ್ನು ದಿಃ 24-12-2020 ರಂದು ಪಡೆದುಕೊಂಡಿರುತ್ತೇನೆ. ನಂತರ ಆರೋಪಿಯ ವಿರುದ್ದ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತಾರೆ.

ಸಾಕ್ಷಿಯು 2 ರ ಮೇಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2 ಬಿ** ಎಂದು ಗುರುತಿಸಲಾಯಿತು. ರಾಸಾಯನಿಕ ಪರೀಕ್ಷಾ ವರದಿಯನ್ನು ನೋಡಿ ಗುರುತಿಸಿದ್ದು **ನಿಪಿ-4** ಎಂದು ಹಾಗೂ ಸಾಕ್ಷಿಯ ಸಹಿಯನ್ನು **4 ಎ** ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಆರೋಪಿ ಹಾಗೂ ಮುದ್ದೆ ಮಾಲನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಶ್ರೀ ಎಂ ಎಸ್ ಎಚ್ ವಕೀಲರಿಂದ**

ನಾನು ಘಟನಾ ಸ್ಥಳಕ್ಕೆ ಹೋಗಿರುವದಿಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಠಾಣೆಯಲ್ಲಿ ಪಡೆದುಕೊಂಡಿರುತ್ತೇನೆ. ಮೇಲಾಧಿಕಾರಿಯ ಮಾತು ಕೇಳಿ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ತೊಂದರೆ ಕೊಡಲು ಹಾಗೂ ಅಂಕಿ-ಸಂಖ್ಯೆಗೋಸ್ಕರ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd**/-

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**

**ನವಲಗುಂದ.**